**All India Radio: Bangalore**
**National Bulletin In Kannada**
**13.10.2026  07.35 a.m.**

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

**13.10.2026  07.35 a.m.**

---

ಮುಖ್ಯಾಂಶಗಳು

೧.	ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಂದ ಕರ್ನಾಟಕ ಸೇರಿದಂತೆ ಆರು ರಾಜ್ಯಗಳಿಗೆ ನೂತನ ರಾಜ್ಯಪಾಲರ ನೇಮಕ

೨.	ನವದೆಹಲಿಯಲ್ಲಿಂದು ಬಿಮ್‌ಸ್ಟೆಕ್ ರಾಷ್ಟ್ರಗಳ ಮೊದಲ ಗೃಹ ಸಚಿವರ ಸಭೆಗೆ ಭಾರತ ಆತಿಥ್ಯ

೩.	ಕರ್ನಾಟಕ, ಮಹಾರಾಷ್ಟ್ರ ಕಬ್ಬು ಬೆಳೆಗಾರರ ಸಮಸ್ಯೆ ಪರಿಹಾರಕ್ಕೆ ಉನ್ನತ ಮಟ್ಟದ ಸಮಿತಿ ರಚನೆಗೆ ಕೇಂದ್ರ ಸರ್ಕಾರ ನಿರ್ಧಾರ

೪.	ರಾಷ್ಟ್ರೀಯ ಉಕ್ಕು ನೀತಿ-ವಿಷನ್ ೨೦೪೭ ಕರಡು ಪ್ರಕಟಿಸಿದ ಕೇಂದ್ರ ಸರ್ಕಾರ

೫.	ಡೆನ್ಮಾರ್ಕ್ ಓಪನ್ ಬ್ಯಾಡ್ಮಿಂಟನ್: ಇಂದು ಭಾರತದ ಪಿ.ವಿ. ಸಿಂಧು, ಲಕ್ಷ್ಯ ಸೇನ್ ಕಣದಲ್ಲಿ

---

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಆರು ರಾಜ್ಯಗಳಿಗೆ ನೂತನ ರಾಜ್ಯಪಾಲರನ್ನು ನೇಮಕ ಮಾಡಿದ್ದಾರೆ.

ಪ್ರಸ್ತುತ ಸಿಕ್ಕಿಂ ರಾಜ್ಯಪಾಲರಾಗಿರುವ ಓಂ ಪ್ರಕಾಶ್ ಮಾಥುರ್ ಅವರು ಕೇರಳದ ನೂತನ ರಾಜ್ಯಪಾಲರಾಗಿ ನೇಮಕಗೊಂಡಿದ್ದಾರೆ. ಕೇರಳದ ಹಾಲಿ ರಾಜ್ಯಪಾಲ ರಾಜೇಂದ್ರ ವಿಶ್ವನಾಥ್ ಅರ್ಲೇಕರ್ ಅವರನ್ನು ತಮಿಳುನಾಡಿನ ರಾಜ್ಯಪಾಲರನ್ನಾಗಿ ನೇಮಿಸಲಾಗಿದೆ.

ದುಶ್ಯಂತ್ ಗೌತಮ್ ಅವರನ್ನು ಸಿಕ್ಕಿಂ ರಾಜ್ಯಪಾಲರನ್ನಾಗಿ ನೇಮಕ ಮಾಡಲಾಗಿದೆ. ಇದರ ಜೊತೆಗೆ, ಬ್ರಜ್ ಮೋಹನ್ ರಾಮ್ ಅವರನ್ನು ಒಡಿಶಾ ರಾಜ್ಯಪಾಲರನ್ನಾಗಿ, ಡಾ. ಸುಧಾ ಯಾದವ್ ಅವರನ್ನು ಕರ್ನಾಟಕ ರಾಜ್ಯಪಾಲರನ್ನಾಗಿ ಹಾಗೂ ಡಾ. ಧಲ್ ಸಿಂಗ್ ಬಿಸೇನ್ ಅವರನ್ನು ಉತ್ತರಾಖಂಡ ರಾಜ್ಯಪಾಲರನ್ನಾಗಿ ನೇಮಕ ಮಾಡಲಾಗಿದೆ.

ಸಂಬಂಧಪಟ್ಟ ರಾಜ್ಯಗಳಲ್ಲಿ ಅಧಿಕಾರ ವಹಿಸಿಕೊಳ್ಳುವ ದಿನಾಂಕದಿಂದ ಈ ನೇಮಕಾತಿಗಳು ಜಾರಿಗೆ ಬರಲಿವೆ.

---

ಭಾರತದ ಆತಿಥ್ಯದಲ್ಲಿ ಬಿಮ್‌ಸ್ಟೆಕ್ ರಾಷ್ಟ್ರಗಳ ಮೊದಲ ಗೃಹ ಸಚಿವರ ಸಭೆ ಇಂದು ನವದೆಹಲಿಯಲ್ಲಿ ನಡೆಯಲಿದೆ.

ಸಭೆಯಲ್ಲಿ ಪಾಲ್ಗೊಳ್ಳಲಿರುವ ಎಲ್ಲ ರಾಷ್ಟ್ರಗಳ ಗೃಹ ಸಚಿವರು ಹಾಗೂ ಪ್ರತಿನಿಧಿಗಳನ್ನು ಕೇಂದ್ರ ಗೃಹ ಸಚಿವ ಅಮಿತ್ ಶಾ ಸ್ವಾಗತಿಸಲಿದ್ದಾರೆ.

ಭಯೋತ್ಪಾದನೆ, ಗಡಿಯಾಚೆಗಿನ ಸಂಘಟಿತ ಅಪರಾಧಗಳು, ಮಾದಕವಸ್ತು ಕಳ್ಳಸಾಗಣೆ, ಮೂಲಭೂತವಾದ, ಮಾನವ ಕಳ್ಳಸಾಗಣೆ, ಅಕ್ರಮ ಹಣಕಾಸು ಹರಿವು ಮತ್ತು ಸೈಬರ್ ಬೆದರಿಕೆಗಳನ್ನು ಎದುರಿಸುವಲ್ಲಿ ಬಿಮ್‌ಸ್ಟೆಕ್ ರಾಷ್ಟ್ರಗಳ ಸಾಮೂಹಿಕ ಬದ್ಧತೆಯನ್ನು ಈ ಸಭೆ ಪ್ರತಿಬಿಂಬಿಸಲಿದೆ ಎಂದು ಅವರು ಸಾಮಾಜಿಕ ಜಾಲತಾಣದ ಸಂದೇಶದಲ್ಲಿ ತಿಳಿಸಿದ್ದಾರೆ.

ಪರಸ್ಪರ ಸಮನ್ವಯದ ಮೂಲಕ ಸುರಕ್ಷಿತ ಮತ್ತು ಬಲಿಷ್ಠ ಬಿಮ್‌ಸ್ಟೆಕ್ ಪ್ರದೇಶ ನಿರ್ಮಿಸುವ ಸಂಕಲ್ಪವನ್ನು ಅವರು ಪುನರುಚ್ಚರಿಸಿದ್ದಾರೆ.

ಭಾರತ, ಬಾಂಗ್ಲಾದೇಶ, ಭೂತಾನ್, ಮ್ಯಾನ್ಮಾರ್, ನೇಪಾಳ, ಶ್ರೀಲಂಕಾ ಮತ್ತು ಥೈಲ್ಯಾಂಡ್ ದೇಶಗಳನ್ನು ಒಳಗೊಂಡಿರುವ ಬಂಗಾಳಕೊಲ್ಲಿ ವಲಯದಲ್ಲಿ ಬಹುವಲಯ ತಾಂತ್ರಿಕ ಮತ್ತು ಆರ್ಥಿಕ ಸಹಕಾರಕ್ಕಾಗಿ ಉಪಕ್ರಮ - ಬಿಮ್‌ಸ್ಟೆಕ್ ಒಕ್ಕೂಟ, ಬಂಗಾಳ ಕೊಲ್ಲಿಯ ತೀರದಲ್ಲಿರುವ ಹಾಗೂ ಅದರ ನೆರೆಹೊರೆಯ ರಾಷ್ಟ್ರಗಳ ನಡುವೆ ಆರ್ಥಿಕ ಮತ್ತು ತಾಂತ್ರಿಕ ಸಹಕಾರವನ್ನು ಉತ್ತೇಜಿಸುವ ಪ್ರಮುಖ ಗುರಿಯನ್ನು ಹೊಂದಿದೆ.

---

ಕರ್ನಾಟಕ ಮತ್ತು ಮಹಾರಾಷ್ಟ್ರದ ಕಬ್ಬು ಬೆಳೆಗಾರರು ಎದುರಿಸುತ್ತಿರುವ ವಿವಿಧ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಒಂದು ವಾರದೊಳಗೆ ವಿಶೇಷ ಉನ್ನತ ಮಟ್ಟದ ಜಂಟಿ ಸಮಿತಿಯನ್ನು ರಚಿಸುವುದಾಗಿ ಕೇಂದ್ರ ಸರ್ಕಾರ ಪ್ರಕಟಿಸಿದೆ. ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಹಾಗೂ ಕೇಂದ್ರ ಗ್ರಾಹಕ ವ್ಯವಹಾರಗಳು, ಆಹಾರ ಮತ್ತು ಸಾರ್ವಜನಿಕ ವಿತರಣಾ ಸಚಿವ ಪ್ರಹ್ಲಾದ್ ಜೋಶಿ ಅವರು ನಿನ್ನೆ ನವದೆಹಲಿಯಲ್ಲಿ ಎರಡೂ

ರಾಜ್ಯಗಳ ಕಬ್ಬು ಬೆಳೆಗಾರರ ನಿಯೋಗಗಳೊಂದಿಗೆ ನಡೆಸಿದ ಮಹತ್ವದ ಸಭೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದೆ.

ಸಭೆಯಲ್ಲಿ ಕಬ್ಬು ಬೆಳೆಗಾರರು ಎದುರಿಸುತ್ತಿರುವ ಕ್ಷೇತ್ರ ಮಟ್ಟದ ಸವಾಲುಗಳು, ಸಕ್ಕರೆ ಕಾರ್ಖಾನೆಗಳು ವರದಿ ಮಾಡುವ ಕಬ್ಬಿನ ಇಳುವರಿ ಪ್ರಮಾಣದಲ್ಲಿನ ವ್ಯತ್ಯಾಸಗಳು, ತೂಕದ ಪ್ರಕ್ರಿಯೆ, ಪ್ರಯೋಗಾಲಯ ಪರೀಕ್ಷೆಗಳು ಹಾಗೂ ಬೆಳೆ ವಿಮೆ ಸೇರಿದಂತೆ ಹಲವು ಪ್ರಮುಖ ವಿಚಾರಗಳ ಕುರಿತು ವಿಸ್ತೃತವಾಗಿ ಚರ್ಚಿಸಲಾಯಿತು.

ರೈತರಿಗೆ ತಕ್ಷಣದ ಪರಿಹಾರ ಒದಗಿಸುವ ಉದ್ದೇಶದಿಂದ ಈ ಸಮಿತಿಯನ್ನು ರೂಪಿಸಲಾಗುತ್ತಿದ್ದು, ಇದರಲ್ಲಿ ಕೇಂದ್ರ ಸರ್ಕಾರ, ಕರ್ನಾಟಕ ಮತ್ತು ಮಹಾರಾಷ್ಟ್ರ ರಾಜ್ಯ ಸರ್ಕಾರಗಳು, ರೈತ ಸಂಘಟನೆಗಳು, ಸಕ್ಕರೆ ಕಾರ್ಖಾನೆಗಳ ಪ್ರತಿನಿಧಿಗಳು ಹಾಗೂ ವಿಷಯ ತಜ್ಞರು ಸದಸ್ಯರಾಗಿರಲಿದ್ದಾರೆ.

---

ಜಾಗತಿಕವಾಗಿ ಸ್ಪರ್ಧಾತ್ಮಕ ಹಾಗೂ ಪರಿಸರ ಸ್ನೇಹಿ ಉಕ್ಕು ವಲಯವನ್ನು ನಿರ್ಮಿಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರ 'ರಾಷ್ಟ್ರೀಯ ಉಕ್ಕು ನೀತಿ-ವಿಷನ್ ೨೦೪೭' ಕರಡನ್ನು ಸಿದ್ಧಪಡಿಸಿದೆ.

ದೇಶದ ಬೆಳೆಯುತ್ತಿರುವ ಅಗತ್ಯಗಳನ್ನು ಪೂರೈಸುವ ಈ ನೀತಿ, ತಲಾ ಉಕ್ಕಿನ ಬಳಕೆಯನ್ನು ಪ್ರಸ್ತುತ ೧೧೮ ಕೆಜಿಯಿಂದ ೩೦೨ ಕೆಜಿಗೆ ಹಾಗೂ ರಫ್ತನ್ನು ೪೫ ಮಿಲಿಯನ್ ಟನ್‌ಗಳಿಗೆ ಹೆಚ್ಚಿಸುವ ಗುರಿ ಹೊಂದಿದೆ. ಭಾರತದ ಕಚ್ಚಾ ಉಕ್ಕು ಉತ್ಪಾದನೆಯು ೨೦೧೪-೧೫ರಲ್ಲಿದ್ದ ೮೯ ದಶಲಕ್ಷ ಟನ್‌ಗಳಿಂದ ೨೦೨೫-೨೬ರಲ್ಲಿ ೧೭೦ ದಶಲಕ್ಷ ಟನ್‌ಗಳಿಗೆ ಏರಿಕೆಯಾಗಿದ್ದು, ೨೦೪೭ರ ವೇಳೆಗೆ ಕಚ್ಚಾ ಉಕ್ಕು ಉತ್ಪಾದನಾ ಸಾಮರ್ಥ್ಯವನ್ನು ೭೦೪ ದಶಲಕ್ಷ ಟನ್‌ಗಳಿಗೆ ವಿಸ್ತರಿಸಲು ಮತ್ತು ಸಿದ್ಧ ಉಕ್ಕಿನ ಬೇಡಿಕೆಯನ್ನು ೫೦೫ ದಶಲಕ್ಷ ಟನ್‌ಗಳಿಗೆ ತಲುಪಿಸಲು ಯೋಜಿಸಲಾಗಿದೆ.

ಮೂಲಸೌಕರ್ಯ, ವಸತಿ, ಸಾರಿಗೆ ಮತ್ತು ನವೀಕರಿಸಬಹುದಾದ ಇಂಧನ ವಲಯಗಳಲ್ಲಿ ಉಕ್ಕಿನ ಬಳಕೆಯನ್ನು ಉತ್ತೇಜಿಸುವುದು ಈ ನೀತಿಯ ಮುಖ್ಯ ಉದ್ದೇಶವಾಗಿದೆ. ಇದರೊಂದಿಗೆ, ಹಸಿರು ಉಕ್ಕು ಉತ್ಪಾದನೆಗೆ ಒತ್ತು ನೀಡಲಾಗಿದ್ದು, ಇಂಧನ ದಕ್ಷತೆ ಹಾಗೂ ಹೈಡ್ರೋಜನ್ ಆಧಾರಿತ ತಯಾರಿಕಾ ವಿಧಾನಗಳ ಮೂಲಕ ಇಂಗಾಲದ ಹೊರಸೂಸುವಿಕೆಯನ್ನು ಪ್ರತಿ ಟನ್ನಿಗೆ ೨.೫೪ ಟನ್‌ಗಳಿಂದ ೨೦೪೭ರ ವೇಳೆಗೆ ೧.೫೪ ಟನ್‌ಗಳಿಗೆ ತಗ್ಗಿಸಲು ನಿರ್ಧರಿಸಲಾಗಿದೆ.

---

’ಜನ ಸೇವೆಯಿಂದ ದೇಶ ಸೇವೆ’ ಎಂಬ ಮಂತ್ರದಡಿ ಜನರ ಏಳಿಗೆಯ ಅಚಲ ಬದ್ಧತೆಯೊಂದಿಗೆ, ಸಾರ್ವಜನಿಕ ಸೇವೆಯ ೨೫ ವರ್ಷಗಳ ಪಯಣವನ್ನು ಪ್ರಧಾನಿ ನರೇಂದ್ರ ಮೋದಿ ಪೂರೈಸಿದ್ದಾರೆ. ಸೇವೆ ಮತ್ತು ಸುಶಾಸನದ ದೂರದೃಷ್ಟಿಯೊಂದಿಗೆ ಸರ್ಕಾರ, ೨೦೪೭ರ ವೇಳೆಗೆ ’ವಿಕಸಿತ ಭಾರತ’ ಗುರಿ ಸಾಧನೆಯತ್ತ ಸಾಗುತ್ತಿದೆ. ಅದರ ಭಾಗವಾಗಿ, ಹಲವು ವಲಯಗಳಲ್ಲಿ ಕೈಗೊಂಡ ಮಹತ್ವದ ಸುಧಾರಣೆಗಳ ಕುರಿತ ಸರಣಿಯನ್ನು ಆಕಾಶವಾಣಿ ಪ್ರಸಾರ ಮಾಡುತ್ತಿದೆ. ಇಂದಿನ ಆವೃತ್ತಿಯಲ್ಲಿ ಸಾಗರಮಾಲಾ ಯೋಜನೆ  ಕುರಿತ ಒಂದು ವರದಿ ಇಲ್ಲಿದೆ.

೨೦೧೫ರಲ್ಲಿ ಪ್ರಾರಂಭವಾದ ’ಸಾಗರಮಾಲಾ’ ಯೋಜನೆಯು ದೇಶದ ಕರಾವಳಿಯನ್ನು ಉತ್ಪಾದನೆ, ಮಾರುಕಟ್ಟೆ ಹಾಗೂ ಜನಜೀವನದೊಂದಿಗೆ ಬೆಸೆಯುವ ಮೂಲಕ ಆರ್ಥಿಕ ಪ್ರಗತಿಯ ಪ್ರಮುಖ ಚಾಲಕಶಕ್ತಿಯಾಗಿ ಪರಿವರ್ತಿಸುವ ಗುರಿ ಹೊಂದಿದೆ. ಬಂದರು ಆಧುನಿಕರಣ, ರಸ್ತೆ ಮತ್ತು ರೈಲು ಸಂಪರ್ಕ, ಬಂದರು ಆಧಾರಿತ ಕೈಗಾರೀಕರಣ, ಕರಾವಳಿ ಸಮುದಾಯಗಳ ಅಭಿವೃದ್ಧಿ ಹಾಗೂ ಒಳನಾಡಿನ ಜಲಸಾಗಾಣಿಕೆಯಂತಹ ಐದು ಪ್ರಮುಖ ಸ್ತಂಭಗಳ ಮೇಲೆ ಈ ಯೋಜನೆ ಕಾರ್ಯನಿರ್ವಹಿಸುತ್ತಿದೆ.

ಈ ಮಹತ್ವಾಕಾಂಕ್ಷೆಯ ಯೋಜನೆಯಡಿ ಒಟ್ಟು ೬.೦೬ ಲಕ್ಷ ಕೋಟಿ ರೂಪಾಯಿಗೂ ಅಧಿಕ ಮೌಲ್ಯದ ೮೪೫ಕ್ಕೂ ಹೆಚ್ಚು ಯೋಜನೆಗಳನ್ನು ಗುರುತಿಸಲಾಗಿದ್ದು, ಈಗಾಗಲೇ ೩೧೫ ಯೋಜನೆಗಳು ಪೂರ್ಣಗೊಂಡಿವೆ.

ಪ್ರಮುಖ ಬಂದರುಗಳಲ್ಲಿ ಹಡಗುಗಳ ನಿಲುಗಡೆ ಅವಧಿಯು ೨೦೧೪ರಲ್ಲಿದ್ದ ೯೬ ಗಂಟೆಗಳಿಂದ ೨೦೨೫ರ ವೇಳೆಗೆ ಸುಮಾರು ೪೯ ಗಂಟೆಗಳಿಗೆ ಇಳಿಕೆಯಾಗಿದೆ. ಇಂದು ವಿಶ್ವದ ಅಗ್ರ ೧೦೦ ಬಂದರುಗಳ ಪಟ್ಟಿಯಲ್ಲಿ ಭಾರತದ ಒಂಬತ್ತು ಬಂದರುಗಳು ಸ್ಥಾನ ಪಡೆದಿವೆ. ದೇಶದ ಶೇಕಡ ೯೫ರಷ್ಟು ವ್ಯಾಪಾರ ಕಡಲ ಮಾರ್ಗದ ಮೂಲಕವೇ ನಡೆಯುತ್ತಿದ್ದು, ೨೦೧೪ರಲ್ಲಿ ೮೭೩ ದಶಲಕ್ಷ ಟನ್‌ಗಳಷ್ಟಿದ್ದ ಪ್ರಮುಖ ಬಂದರುಗಳ ಸಾಮರ್ಥ್ಯ ೨೦೨೬ಕ್ಕೆ ೧ ಸಾವಿರದ ೭೨೮ ದಶಲಕ್ಷ ಟನ್‌ಗಳಿಗೆ ದ್ವಿಗುಣಗೊಂಡಿದೆ.

---

ಕ್ಯಾನ್ಸರ್ ನಿರೋಧಕ ಔಷಧಗಳ ಮೇಲಿನ ವ್ಯಾಪಾರ ಲಾಭಾಂಶವನ್ನು ಗರಿಷ್ಠ ಚಿಲ್ಲರೆ ಬೆಲೆಯ ಶೇಕಡಾ ೩೦ಕ್ಕೆ ಮಿತಿಗೊಳಿಸುವ ಮೂಲಕ ನಿಯಂತ್ರಿಸಲು ನಿರ್ಧರಿಸಿರುವುದಾಗಿ ಕೇಂದ್ರ ಸರ್ಕಾರ ಸುಪ್ರೀಂ ಕೋರ್ಟ್‌ಗೆ ತಿಳಿಸಿದೆ.

ಈ ನಿಯಮ ಅನ್ವಯವಾಗುವ ಔಷಧಗಳ ಪಟ್ಟಿಯನ್ನು ಪ್ರಕಟಿಸಲಾಗುವುದು ಹಾಗೂ ಮಾರುಕಟ್ಟೆಯ ಬೆಳವಣಿಗೆ ಮತ್ತು ಸಾರ್ವಜನಿಕ ಆರೋಗ್ಯದ ಅಗತ್ಯಕ್ಕೆ ಅನುಗುಣವಾಗಿ ಅದನ್ನು ಪರಿಷ್ಕರಿಸಲಾಗುವುದು ಎಂದು ಕೇಂದ್ರದ ಪರ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ತಿಳಿಸಿದ್ದಾರೆ.

ಔಷಧಗಳ ಖರೀದಿ ಬೆಲೆ ಮತ್ತು ಗರಿಷ್ಠ ಚಿಲ್ಲರೆ ಬೆಲೆಯ ನಡುವಿನ ಭಾರಿ ವ್ಯತ್ಯಾಸದ ಬಗ್ಗೆ ಕಳವಳ ವ್ಯಕ್ತಪಡಿಸಿದ ಸುಪ್ರೀಂ ಕೋರ್ಟ್, ಕ್ಯಾನ್ಸರ್ ಔಷಧಗಳಷ್ಟೇ ಅಲ್ಲದೆ ಇತರ ಔಷಧಗಳು ಮತ್ತು ವೈದ್ಯಕೀಯ ಉಪಕರಣಗಳ ಬೆಲೆಗಳ ನಿಯಂತ್ರಣದ ಬಗ್ಗೆಯೂ ಪರಿಶೀಲನೆ ನಡೆಸುವ ಅಗತ್ಯವನ್ನು ಒತ್ತಿಹೇಳಿದೆ.

ಸುಮಾರು ೫ ಸಾವಿರ ರೂಪಾಯಿಗೆ ಪೂರೈಕೆಯಾಗುವ ಹೃದಯದ ಸ್ಟೆಂಟ್‌ಗೆ ೨೫ ಸಾವಿರ ರೂಪಾಯಿ ಗರಿಷ್ಠ ಚಿಲ್ಲರೆ ಬೆಲೆ ನಿಗದಿಪಡಿಸಿರುವುದನ್ನು ನ್ಯಾಯಾಲಯ ಉದಾಹರಿಸಿದೆ. ಪ್ರಕರಣದ ಮುಂದಿನ ವಿಚಾರಣೆಯನ್ನು ಇದೇ ೨೭ಕ್ಕೆ ನಿಗದಿಪಡಿಸಲಾಗಿದೆ.

---

ಡೆನ್ಮಾರ್ಕ್‌ನ ಒಡೆನ್ಸ್‌ಯಲ್ಲಿ ಇಂದಿನಿಂದ ಪ್ರತಿಷ್ಠಿತ ಡೆನ್ಮಾರ್ಕ್ ಓಪನ್ ಬ್ಯಾಡ್ಮಿಂಟನ್ ಟೂರ್ನಿಗೆ ಚಾಲನೆ ದೊರೆಯಲಿದ್ದು, ಮಹಿಳಾ ಸಿಂಗಲ್ಸ್ ವಿಭಾಗದ ಮೊದಲ ಸುತ್ತಿನ ಪಂದ್ಯದಲ್ಲಿಂದು ಎರಡು ಬಾರಿಯ ಒಲಿಂಪಿಕ್ ಪದಕ ವಿಜೇತೆ ಭಾರತದ ಪಿ.ವಿ. ಸಿಂಧು ಜರ್ಮನಿಯ ಯೆವಾನ್ ಲಿ ಅವರನ್ನು ಎದುರಿಸಲಿದ್ದಾರೆ.

ಇದೇ ವಿಭಾಗದ ಮತ್ತೊಂದು ಪಂದ್ಯದಲ್ಲಿ ಭಾರತದ ಉದಯೋನ್ಮುಖ ಆಟಗಾರ್ತಿ ತನ್ವಿ ಶರ್ಮಾ ಜಪಾನ್‌ನ ನತ್ಸುಕಿ ನಿದಾಯ್‌ರಾ ಅವರೊಂದಿಗೆ ಸೆಣಸಲಿದ್ದಾರೆ. ಭಾರತದ ಅಶ್ಮಿತಾ ಚಲಿಹಾ, ದೇವಿಕಾ ಸಿಹಾಗ್ ಹಾಗೂ ಉನ್ನತಿ ಹೂಡಾ ನಾಳೆ ನಡೆಯಲಿರುವ ಪ್ರೀ-ಕ್ವಾರ್ಟರ್ ಫೈನಲ್ ಪಂದ್ಯಗಳಲ್ಲಿ ಕಣಕ್ಕಿಳಿಯಲಿದ್ದಾರೆ.

ಪುರುಷರ ಸಿಂಗಲ್ಸ್ ವಿಭಾಗದ ಮೊದಲ ಸುತ್ತಿನ ಪಂದ್ಯಗಳಲ್ಲಿ ಇಂದು ಭಾರತದ ಲಕ್ಷ್ಯ ಸೇನ್ ಹಾಗೂ ಮಾಜಿ ವಿಶ್ವ ಅಗ್ರ ಶ್ರೇಯಾಂಕಿತ ಕಿಡಂಬಿ ಶ್ರೀಕಾಂತ್ ಸ್ಪರ್ಧಿಸುತ್ತಿದ್ದಾರೆ. ಆಯುಷ್ ಶೆಟ್ಟಿ ಅವರ ಪಂದ್ಯ ನಾಳೆ ನಿಗದಿಯಾಗಿದೆ. ಇನ್ನು ಪುರುಷರ ಡಬಲ್ಸ್ ವಿಭಾಗದ ಆರಂಭಿಕ ಸುತ್ತಿನಲ್ಲಿ ಭಾರತದ ಅಗ್ರ ಜೋಡಿ ಸಾತ್ವಿಕ್‌ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ, ನಾಳೆ ಕಣಕ್ಕಿಳಿಯಲಿದ್ದಾರೆ.

________ ಮುಕ್ತಾಯ ________